# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 195 |
| ಸದಸ್ಯರ ಹೆಸರು | : | ಶ್ರೀ. ಶರಣಗೌಡ ಬಯ್ಯಾಪುರ (ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು) |
| ಉತ್ತರಿಸುವ ದಿನಾಂಕ | : | 10/12/2024 |
| ಉತ್ತರಿಸುವ ಸಚಿವರು | : | ಮಾನ್ಯ ಪೌರಾಡಳಿತ ಹಾಗೂ ಹಜ್ ಸಚಿವರು |

| | ಪ್ರಶ್ನೆ | ಉತ್ತರ |
|---|---|---|
| ಅ | ರಾಯಚೂರು ಜಿಲ್ಲೆಯ ಲಿಂಗಸಗೂರು ಪಟ್ಟಣದ ಈಗಿರುವ ಪುರಸಭೆಯನ್ನು ನಗರಸಭೆಯನ್ನಾಗಿ ಮೇಲ್ದರ್ಜೆಗೇರಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ; ಇದ್ದಲ್ಲಿ, ಮಾಹಿತಿ ಒದಗಿಸುವುದು; | ರಾಯಚೂರು ಜಿಲ್ಲೆಯ ಲಿಂಗಸಗೂರು ಪಟ್ಟಣದ ಈಗಿರುವ ಪುರಸಭೆಯನ್ನು ನಗರಸಭೆಯನ್ನಾಗಿ ಮೇಲ್ದರ್ಜೆಗೇರಿಸುವ ಪ್ರಸ್ತಾವನೆ ಸರ್ಕಾರದ ಪರಿಶೀಲನೆಯಲ್ಲಿ ಇರುವುದಿಲ್ಲ.<br>ಜಿಲ್ಲಾಧಿಕಾರಿ, ರಾಯಚೂರು ಜಿಲ್ಲೆ ರವರಿಂದ ಸ್ವೀಕೃತವಾಗುವ ದಾಖಲೆಗಳಿಗನುಗುಣವಾಗಿ ನಿರ್ದೇಶಕರು, ಪೌರಾಡಳಿತ ನಿರ್ದೇಶನಾಲಯ ರವರು ಕರ್ನಾಟಕ ಪೌರಸಭೆಗಳ ಅಧಿನಿಯಮ 1964 ರನ್ವಯ ಅರ್ಹವಾದ ಪ್ರಸ್ತಾವನೆಯನ್ನು ಸೂಕ್ತ ಶಿಫಾರಸ್ಸಿನೊಂದಿಗೆ ಸರ್ಕಾರಕ್ಕೆ ಸಲ್ಲಿಸಿದಲ್ಲಿ ನಿಯಮಾನುಸಾರ ಪರಿಶೀಲಿಸಿ ಕ್ರಮವಹಿಸಲಾಗುತ್ತದೆ. |
| ಆ | ರಾಯಚೂರು ಜಿಲ್ಲೆಯ ಲಿಂಗಸಗೂರು ಪಟ್ಟಣವು ಸರ್ಕಾರದ ಸೌಲಭ್ಯಗಳಿಲ್ಲದೇ ವಂಚಿತವಾಗಿದ್ದು; ಲಿಂಗಸಗೂರು ಪುರಸಭೆಯನ್ನು ನಗರಸಭೆಯನ್ನಾಗಿ ಮೇಲ್ದರ್ಜೆಗೇರಿಸಲು ಸರ್ಕಾರ ಕೈಗೊಂಡ ಕ್ರಮವೇನು; | |
| ಇ | ಲಿಂಗಸಗೂರಿನ ಪುರಸಭೆಯಲ್ಲಿ ದಿನಗೂಲಿ ಆಧಾರದ ಮೇಲೆ ಸುಮಾರು ವರ್ಷಗಳಿಂದ ಕೆಲಸ ಮಾಡುತ್ತಿರುವ 40 ಜನ ನೀರು ಸರಬರಾಜುದಾರರನ್ನು ಖಾಯಂ ಮಾಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ? | ಲಿಂಗಸಗೂರಿನ ಪುರಸಭೆಯಲ್ಲಿ ದಿನಗೂಲಿ ಆಧಾರದ ಮೇಲೆ ಕೆಲಸ ನಿರ್ವಹಿಸುತ್ತಿರುವ ನೀರು ಸರಬರಾಜುದಾರರನ್ನು ಖಾಯಂ ಮಾಡುವ ಪ್ರಸ್ತಾವನೆ ಸರ್ಕಾರದ ಪರಿಶೀಲನೆಯಲ್ಲಿ ಇರುವುದಿಲ್ಲ.<br>ಲಿಂಗಸಗೂರು ಪುರಸಭೆಯಲ್ಲಿ ದಿನಗೂಲಿ / ಕ್ಷೇಮಾಭಿವೃದ್ಧಿ ಆಧಾರದ ಮೇಲೆ ಕರ್ತವ್ಯ ನಿರ್ವಹಿಸುತ್ತಿರುವ 24 ಸಿಬ್ಬಂದಿಯನ್ನು ಒಳಗೊಂಡಂತೆ ನಗರ ಸ್ಥಳೀಯ ಸಂಸ್ಥೆಗಳಲ್ಲಿ ನೀರು ಸರಬರಾಜು ವಿಭಾಗದಲ್ಲಿ ಕಾರ್ಯ ನಿರ್ವಹಿಸುತ್ತಿರುವ ಡಿ ದರ್ಜೆ ನೌಕರರಾದ ಸಹಾಯಕರು/ಹೆಲ್ಪರ್/ವಾಲ್ವಮನ್‌ಗಳ ಎಲ್ಲಾ ಹೊರಗುತ್ತಿಗೆ ನೌಕರರ ವೇತನವನ್ನು ಯಥಾಸ್ಥಿತಿ ಪ್ರಕಾರ ಮುಂದುವರೆಸಲು ಹಾಗೂ ಕಾರ್ಮಿಕ ಇಲಾಖೆಯ ಕನಿಷ್ಠ ವೇತನ ಕಾಯ್ದೆಯಂತೆ ವೇತನ ಪಾವತಿಸಲು ಕ್ರಮವಹಿಸುವಂತೆ ಪೌರಾಡಳಿತ ನಿರ್ದೇಶಕರಿಗೆ ಸರ್ಕಾರದಿಂದ ನಿರ್ದೇಶನ ನೀಡಲಾಗಿರುತ್ತದೆ. |

ಸಂಖ್ಯೆ:ನಅಇ 64 ಎಲ್‌ಸಿಕ್ಯೂ 2024.

(ರಹೀಂ ಖಾನ್)
ಪೌರಾಡಳಿತ ಹಾಗೂ ಹಜ್ ಸಚಿವರು